# ಕರ್ನಾಟಕ ವಿಧಾನ ಪರಿಷತ್ತು

1. ಚುಕ್ಕೆ ಗುರುತಿಲ್ಲದ ಪ್ರಶ್ನೆ : 1189
2. ಸದಸ್ಯರ ಹೆಸರು : ಶ್ರೀ ಟಿ.ಎನ್. ಜವರಾಯಿಗೌಡ (ವಿಧಾನ ಸಭಾ ಕ್ಷೇತ್ರ)
3. ಉತ್ತರಿಸಬೇಕಾದ ದಿನಾಂಕ : 18.03.2025
4. ಉತ್ತರಿಸುವ ಸಚಿವರು : ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಹಾಗೂ ಮೂಲಸೌಲಭ್ಯ ಅಭಿವೃದ್ಧಿ ಸಚಿವರು.

| ಕ್ರ ಸಂ | ಪ್ರಶ್ನೆ | ಉತ್ತರ |
|---|---|---|
| (ಅ) | ರಾಜದಾನಿ ಬೆಂಗಳೂರಿಗೆ 2ನೇ ಅಂತರಾಷ್ಟ್ರೀಯ ವಿಮಾನನಿಲ್ದಾಣವನ್ನು ಮಾಡಲು ತಾಂತ್ರಿಕ ಸಂಭಾವ್ಯತೆ, ಸಂಪರ್ಕ ರಸ್ತೆಗೆ ರೈಲು ಮತ್ತು ಮೆಟ್ರೋ ಸಂಪರ್ಕ ಸ್ಥಳ ವೈಶಿಷ್ಟ್ಯತೆಗಳು ಹಾಗೂ ಇತರೆ ಅಂಶಗಳ ಬಗ್ಗೆ ಅಧ್ಯಯನ ಮಾಡಲು ಐಡೆಕ್ ಸಂಸ್ಥೆಗೆ ವಹಿಸಲಾಗಿದೆಯೇ; ಅಧ್ಯಯನ ವರದಿ ಸಲ್ಲಿಸಲು ಕಾಲಮಿತಿಯನ್ನು ನಿಗಧಿಮಾಡಲಾಗಿದೆಯೇ; (ಮಾಹಿತಿ ಒದಗಿಸುವುದು) | ರಾಜಧಾನಿ ಬೆಂಗಳೂರಿನಲ್ಲಿ 2ನೇ ಅಂತರಾಷ್ಟ್ರೀಯ ವಿಮಾನ ನಿಲ್ದಾಣವನ್ನು ಅಭಿವೃದ್ಧಿಪಡಿಸಲು ತಾಂತ್ರಿಕ ಸಂಭಾವ್ಯತೆ, ಸಂಪರ್ಕ ರಸ್ತೆಗೆ ರೈಲು ಮತ್ತು ಮೆಟ್ರೋ ಸಂಪರ್ಕ ಸ್ಥಳ ವೈಶಿಷ್ಟ್ಯತೆಗಳು ಹಾಗೂ ಇತರೆ ಅಂಶಗಳ ಬಗ್ಗೆ ಅಧ್ಯಯನ ಮಾಡಲು ಐಡೆಕ್ ಸಂಸ್ಥೆಗೆ ವಹಿಸಲಾಗಿರುತ್ತದೆ. ಪ್ರಸ್ತುತ, ರಾಜ್ಯ ಸರ್ಕಾರವು ಐಡೆಕ್ ಸಂಸ್ಥೆಯು ಗುರುತಿಸಿರುವ ಸ್ಥಳಗಳಲ್ಲಿ 3 ಸ್ಥಳಗಳನ್ನು ಆಯ್ಕೆಗೊಳಿಸಿ, ಸದರಿ ಸ್ಥಳಗಳನ್ನು ಪರಿಶೀಲಿಸಿ, ವಿಮಾನ ನಿಲ್ದಾಣವನ್ನು ಅಭಿವೃದ್ಧಿಪಡಿಸಲು ಸೂಕ್ತ ಮಾರ್ಗದರ್ಶನವನ್ನು ಹಾಗೂ pre-feasibility ವರದಿಯನ್ನು ನೀಡುವಂತೆ ಕೋರಿ ದಿನಾಂಕ: 05.03.2025 ರಂದು ಕೇಂದ್ರ ನಾಗರಿಕ ವಿಮಾನಯಾನ ಸಚಿವಾಲಯ (Ministry of Civil Aviation, Government of India) ಇವರಿಗೆ ಪ್ರಸ್ತಾವನೆಯನ್ನು ಸಲ್ಲಿಸಲಾಗಿರುತ್ತದೆ. |
| (ಆ) | ಹೆಚ್.ಎ.ಎಲ್ ವಿಮಾನನಿಲ್ದಾಣವನ್ನು ಡೊಮಾಸ್ಟಿಕ್ ನಿಲ್ದಾಣವನ್ನಾಗಿ ಅಭಿವೃದ್ಧಿಪಡಿಸಿ ಉಪಯೋಗಿಸಿಕೊಳ್ಳಲು ಸರ್ಕಾರ ಚಿಂತನೆ ನಡೆಸಿದೆಯೇ; | ಹೆಚ್.ಎ.ಎಲ್. ವಿಮಾನ ನಿಲ್ದಾಣವು ಭಾರತೀಯ ವಿಮಾನ ನಿಲ್ದಾಣ ಪ್ರಾಧಿಕಾರ (Airports Authority of India) ಹಾಗೂ ಹೆಚ್.ಎ.ಎಲ್. ಇವರ ವ್ಯಾಪ್ತಿಯಲ್ಲಿರುತ್ತದೆ. ಹೆಚ್.ಎ.ಎಲ್. ವಿಮಾನ ನಿಲ್ದಾಣವನ್ನು ಡೊಮೆಸ್ಟಿಕ್ ವಿಮಾನ ನಿಲ್ದಾಣವನ್ನಾಗಿ ಅಭಿವೃದ್ಧಿಪಡಿಸುವ ಬಗ್ಗೆ ದಿನಾಂಕ: 16.01.2025 ರಂದು ಕೇಂದ್ರ ನಾಗರಿಕ ವಿಮಾನಯಾನ ಸಚಿವಾಲಯ (Ministry of Civil Aviation, Government of India) ನ್ನು ಕೋರಲಾಗಿದೆ. |
| (ಇ) | ಬೆಂಗಳೂರಿಗೆ 2ನೇ ಅಂತರಾಷ್ಟ್ರೀಯ ವಿಮಾನನಿಲ್ದಾಣವನ್ನು ನಿರ್ಮಿಸಲು ಯಾವ ಸ್ಥಳವನ್ನು ನಿಗದಿಪಡಿಸಲು ಉದ್ದೇಶಿಸಿದೆ? (ವಿವರ ನೀಡುವುದು) | ರಾಜ್ಯ ಸರ್ಕಾರವು ಬೆಂಗಳೂರಿನಲ್ಲಿ 2ನೇ ಅಂತರಾಷ್ಟ್ರೀಯ ವಿಮಾನ ನಿಲ್ದಾಣವನ್ನು ಅಭಿವೃದ್ಧಿಪಡಿಸಲು 3 ಸ್ಥಳಗಳನ್ನು ಗುರುತಿಸಲಾಗಿದೆ. ಅವು ಬೆಂಗಳೂರು ನಗರ ಜಿಲ್ಲೆಯ, ಬೆಂಗಳೂರು ದಕ್ಷಿಣ ತಾಲ್ಲೂಕಿನ ಚೂಡಹಳ್ಳಿ ಹತ್ತಿರ ಮತ್ತು ಬೆಂಗಳೂರು ನಗರ ಜಿಲ್ಲೆಯ, ಬೆಂಗಳೂರು ದಕ್ಷಿಣ ತಾಲ್ಲೂಕಿನ ಸೋಮನಹಳ್ಳಿ ಹತ್ತಿರ ಹಾಗೂ ರಾಮನಗರ ಜಿಲ್ಲೆ, ಮಾಗಡಿ ತಾಲ್ಲೂಕಿನ ನೆಲಮಂಗಲದ ಹತ್ತಿರ ಇರುತ್ತವೆ. |

**(ಸಂಖ್ಯೆ:ಮೂಅಇ 53 ರಾಅವಿ 2025)**

**(ಎಂ.ಬಿ. ಪಾಟೀಲ)**
ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಹಾಗೂ
ಮೂಲಸೌಲಭ್ಯ ಅಭಿವೃದ್ಧಿ, ಸಚಿವರು